1	2	3
805	M. G. Manjunath, No. 123 Sanjaynagar Post, Colony, Bangalore-24	Inside CA Site, CIL Employees Layout, No. 50 Main Road. Opp. Watter tank, Geddahalli. Bangalore-24

ಶ್ರೀ ಎಂ. ನಾರಾಯಣಸ್ವಾಮಿ.—ಮಾನ್ಯ ಅಧ್ಯಕ್ಷರೆ, ಈಗ ಮುಚ್ಚಿರುವ ಬೂತ್‌ಗಳನ್ನು ತೆರೆಯಲು ಸರ್ಕಾರಕ್ಕೆ ಇರುವ ಅಡ್ಡಿಯಾದರೂ ಏನು ?

ಶ್ರೀ ಬಿ. ಬಸವಲಿಂಗಪ್ಪ.—ಆತಂಕ ಮತ್ತು ಅಡ್ಡಿ ಏನೂ ಇಲ್ಲ.

ಶ್ರೀ ಎಂ. ನಾರಾಯಣಸ್ವಾಮಿ.—ಮಾನ್ಯ ಸಚಿವರು ೬೧ ಕಲಬೆರಕೆ ಪ್ರಕರಣಗಳು ನಡೆದಿವೆ ಯೆಂದು ಹೇಳಿದ್ದಾರೆ. ಅದರ ಬಗ್ಗೆ ಏನು ಕ್ರಮ ತೆಗೆದುಕೊಂಡಿದ್ದೀರಿ ?

ಶ್ರೀ ಬಿ. ಬಸವಲಿಂಗಪ್ಪ —ನಾನು ಆಗಲೇ ಹೇಳಿದ್ದೇನೆ, ನೋಟೀಸ್ ಕೊಟ್ಟಿದ್ದೇವೆ. ಅವರು ಕೊಟ್ಟಿರತಕ್ಕ ಸಮಜಾಯಿಷಿ ಉತ್ತರ ಸರಿಯಾಗಿಲ್ಲವೆಂದು ಅವರ ಲೈಸನ್ಸ್ ವಜಾ ಮಾಡಿದ್ದೇವೆ.

ಅಧ್ಯಕ್ಷರು.—ಇಲ್ಲಿಗೆ ಪ್ರಶ್ನೋತ್ತರ ವೇಳೆ ಮುಗಿಯಿತು.

ಬೆಂಕೆಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಕೆ.ಜೆ ಜಾರ್ಜ್ (ಸಾರಿಗೆ, ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೆ, ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿ ಮತ್ತು ಉತ್ತರವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಗ್ರಾಮ ಸಹಾಯಕರು ಮತ್ತು ಮಂಡಲ ಪಂಚಾಯಿತಿ ನೌಕರರ ಬಗ್ಗೆ

೭೫. ಶ್ರೀ ಬಿ. ಎಸ್ ಯಡಿಯೂರಪ್ಪ (ಶಿಕಾರಿಪುರ).—ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶುಸಂಗೋಪನೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ಗ್ರಾಮಾಂತರ ಪ್ರದೇಶದಲ್ಲಿ ಕೆಲಸ ಮಾಡುತ್ತಿರುವ ಗ್ರಾಮ ಸಹಾಯಕರು ಮತ್ತು ಮಂಡಲ ಪಂಚಾಯಿತಿಗಳಲ್ಲಿ ಕೆಲಸ ಮಾಡುತ್ತಿರುವ ಖಾಯಂ ದರ್ಜಿ ನೌಕರರ ಸಂಖ್ಯೆ ಎಷ್ಟು ?

ಆ) ಇವರುಗಳ ವೇತನದಲ್ಲಿ ತಾರತಮ್ಯ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ?

ಇ) ಹಾಗಾದ್ದಲ್ಲಿ, ವೇತನ ತಾರತಮ್ಯವನ್ನು ನಿವಾರಿಸಲು ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು ?

ಶ್ರೀ ಬಿ. ಬಸವಲಿಂಗಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶು ಸಂಗೋಪನೆ ಮಂತ್ರಿಗಳು).—

ಅ) ಗ್ರಾಮ ಸಹಾಯಕರು—೧೦,೪೫೦
ಮಂಡಲ ಪಂಚಾಯಿತಿಯ ವಿವಿಧ ವರ್ಗದ ನೌಕರರು—೧೨,೪೭೧

ಆ) ಸ್ವಾಭಾವಿಕ

ಇ) ಯೋಜನೆ ಮಾಡಿರುವುದಿಲ್ಲ.